**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ:ಇ-ಆಡಳಿತ ಆರ್.ಟಿ.ಇ 1 / 2017-18 ದಿನಾಂಕ: 01.01.2018

## ಸುತ್ತೋಲೆ

ವಿಷಯ: 2017-18 ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆಯಡಿ ಶುಲ್ಕ ಮರುಪಾವತಿಯ ಸಂಬಂದ ಬಿಡುಗಡೆ ಮಾಡಿದ ಅನುದಾನವನ್ನು ಬಳಕೆ ಮಾಡುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸುತ್ತೋಲೆ ಸಂಖ್ಯೆ: ಸಿ7(8) ಪ್ರಾಶಿಅ /ಆರ್.ಟಿ.ಇ/ ಶುಲ್ಕಮರುಪಾವತಿ /2017-18 ದಿನಾಂಕ: 16.10.2017

ಉಲ್ಲೇಖಿತ ಈ ಕಛೇರಿಯ ಸುತ್ತೋಲೆಯಲ್ಲಿ, 2016-17 ನೇ ಸಾಲಿನಲ್ಲಿ ಬಾಕಿ ಉಳಿದಿರುವ ಅನುದಾನದ ಬೇಡಿಕೆಯಂತೆ ಮೊತ್ತವನ್ನು ಅಪೀಲ್ ತಂತ್ರಾಂಶದ ಮೂಲಕ ಕ್ರಮವಹಿಸಲು ಈಗಾಗಲೇ ಸೂಚನೆ ನೀಡಲಾಗಿದೆ. 2017-18 ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆಯಡಿ ಶುಲ್ಕ ಮರುಪಾವತಿಯ ಸಂಬಂದ ಅನುದಾನವನ್ನು ಉಪನಿರ್ದೇಶಕರು(ಆಡಳಿತ) ಇವರಿಗೆ ಬಿಡುಗಡೆ ಮಾಡಲಾಗಿದೆ.

2016-17 ನೇ ಸಾಲಿನಲ್ಲಿ ಬಾಕಿ ಉಳಿದಿರುವ ಅನುದಾನದ ಬೇಡಿಕೆಯಂತೆ ಮೊತ್ತವನ್ನು ಅಪೀಲ್ ತಂತ್ರಾಂಶದ ಮೂಲಕ ಬಿಡುಗಡೆ ಮಾಡಬೇಕಾದ ಶಾಲಾ ಮಂಡಳಿಗಳ ಪ್ರಸ್ತಾವನೆಯನ್ನು ನಿಯಮಾನುಸಾರ ತಂತ್ರಾಂಶದಲ್ಲಿ ಪರಿಶೀಲಿಸಿಕೊಂಡು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಜಿಲ್ಲಾ ಉಪನಿರ್ದೇಶಕರ ಹಂತದಲ್ಲಿ ಅನುಮೋದಿಸಿಕೊಂಡು ಈ ಕಛೇರಿಗೆ ಅನುಮೋದನೆಗಾಗಿ ಕಳುಹಿಸತಕ್ಕದ್ದು.

ಅದರಂತೆ 2017-18 ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆಯಡಿ ಶುಲ್ಕ ಮರುಪಾವತಿಯ ಸಂಬಂದ ಬಿಡುಗಡೆ ಮಾಡಲಾದ ಅನುದಾನವನ್ನು ಸಂಬಂದಪಟ್ಟ ಶಾಲಾ ಮಂಡಳಿಯವರು ತಂತ್ರಾಂಶದ ಮೂಲಕ ಸಲ್ಲಿಸಿದ ಪ್ರಸ್ತಾವನೆಯನ್ನು ಸಹ ನಿಯಮಾನುಸಾರ ತಂತ್ರಾಂಶದಲ್ಲಿ ಪರಿಶೀಲಿಸಿಕೊಂಡು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಜಿಲ್ಲಾ ಉಪನಿರ್ದೇಶಕರಿಂದ ಅನುಮೋದನೆಗೊಳಿಸಿಕೊಂಡು ಈ ಕಛೇರಿಗೆ ಅನುಮೋದನೆಗಾಗಿ ಕಳುಹಿಸಲು ಈ ಮೂಲಕ ತಿಳಿಸಿದೆ.

ಈ ಮೇಲೆ ಪ್ರಸ್ತಾಪಿಸಿದ ಬಿಡುಗಡೆಯಾದ ಅನುದಾನವನ್ನು ಸಂಪೂರ್ಣವಾಗಿ ದಿನಾಂಕ 31.01.2018 ರೊಳಗೆ ಬಳಕೆ ಮಾಡಿಕೊಳ್ಳತಕ್ಕದ್ದು. ತಪ್ಪಿದ್ದಲ್ಲಿ ಸಂಬಂದಪಟ್ಟ ಕ್ಷೇತ್ರಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು ಜವಾಬ್ದಾರರಾಗುತ್ತಾರೆ ಎಂದು ಈ ಮೂಲಕ ಸೂಚಿಸಿದೆ.

ಜಂಟಿ ನಿರ್ದೇಶಕರು (ಆಡಳಿತ)

ಇವರಿಗೆ

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತಕ್ರಮಕ್ಕಾಗಿ

ಪ್ರತಿಯನ್ನು

1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ
2. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ಮಾಹಿತಿಗಾಗಿ